OS No. 70/2022 PW-**1**

**ದಿನಾಂಕ 21.01.2023 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ವಾದಿ ಪರ ವಕೀಲರಿಂದ ಃ**

ನಾನು ನನ್ನ ಮುಖ್ಯ ವಿಚಾರಣಾ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಹೇಳಿದ ವಿಚಾರಗಳೆಲ್ಲವೂ ಸತ್ಯವಾಗಿದ್ದು, ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ನಾನು ನನ್ನ ಪರ ಸಾಕ್ಷಿಯಾಗಿ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

ದಿನಾಂಕ 30.03.2021 ರ ನೊಂದಾಯಿತ ಸ್ವಾದೀನ ರಹಿತ ಶುದ್ದ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-1(ಎ) ಎಂದು, ಸದರಿ ದಾಖಲೆಯಲ್ಲಿ ಸಾಕ್ಷಿಯು ಪ್ರತಿವಾದಿ 1 ಮತ್ತು 2 ರವರುಗಳ ಸಹಿಗಳನ್ನು ನೋಡಿ ಗುರುತಿಸಿದ್ದು ಅದರಲ್ಲಿ 1ನೇ ಪ್ರತಿವಾದಿಯವರ ಸಹಿಗಳನ್ನು ಒಟ್ಟಾರೆಯಾಗಿ ನಿಪಿ-1(ಬಿ) ಎಂದು, 2ನೇ ಪ್ರತಿವಾದಿಯವರ ಸಹಿಗಳನ್ನು ಒಟ್ಟಾರೆಯಾಗಿ ನಿಪಿ-1(ಸಿ) ಎಂದು ಗುರುತಿಸಲಾಯಿತು. ಸದರಿ ನಿಪಿ-1 ಕ್ಕೆ ಸಾಕ್ಷಿದಾರರಾದ ಶಶಿಕುಮಾರ್ ಮತ್ತು ಗೋವಿಂದರವರು ನನ್ನ ಸಮಕ್ಷಮ ಸಹಿಗಳನ್ನು ಮಾಡಿರುತ್ತಾರೆ. ಸದರಿ ದಾಖಲೆಯನ್ನು ಬರಹಗಾರರಾದ ಎಂ ಎಸ್ ರವಿಶಂಕರ್ ರವರು ಬರೆದಿರುತ್ತಾರೆ. ಸದರಿ ಅವರ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಡಿ) ಎಂದು ಗುರುತಿಸಲಾಯಿತು. ಸರ್ವೆ ನಂಬರ್ 104/18 ಕ್ಕೆ ಸಂಬಂದಪಟ್ಟ ಆರ್ ಟಿ ಸಿ ಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-2 ಎಂದು, ಎಂ ಆರ್ ಸಂಖ್ಯೆ ಹೆಚ್ -10 ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-3 ಎಂದು, ನಮೂನೆ 15 ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-4 ಎಂದು, ಪ್ರತಿವಾದಿಗಳಿಗೆ 4 ಲಕ್ಷ ಮತ್ತು 10 ಲಕ್ಷ ರೂಪಾಯಿಗಳಿಗೆ ಸಂಬಂದಪಟ್ಟಂತೆ ಮೊದಲು ಚೆಕ್ಕು ನೀಡಿದ್ದು ಸದರಿ ಚೆಕ್ಕುಗಳು ನಗದೀಕರಣ ಗೊಳ್ಳದೇ ವಾಪಸ್ಸಾಗಿದ್ದು ಆನಂತರ ಪ್ರತಿವಾದಿಗಳಿಗೆ ಆರ್ ಟಿ ಜಿ ಎಸ್

ಮುಖಾಂತರ 4 ಲಕ್ಷ ಮತ್ತು 10 ಲಕ್ಷ ರೂಪಾಯಿಗಳನ್ನು ಪಾವತಿಸಿರುತ್ತೇನೆ. ಸದರಿ ಆರ್ ಟಿ ಜಿ ಎಸ್ ಮುಖಾಂತರ ಕಳುಹಿಸಿದ 14 ಲಕ್ಷ ರೂಪಾಯಿಗಳು ಪ್ರತಿವಾದಿಗಳಿಗೆ ಸಂದಾಯವಾಗಿರುತ್ತದೆ. ಅಮಾನ್ಯಗೊಂಡಿರುವ 2 ಚೆಕ್ಕುಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಮತ್ತು ನಿಪಿ-6 ಎಂದು, ಬ್ಯಾಂಕಿನ ಹಿಂಬರಹಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, 2 ಆರ್ ಟಿ ಜಿ ಎಸ್ ಚಲನ್ ಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಮತ್ತು ನಿಪಿ-9 ಎಂದು, ದಿಃ03.02.2022 ರ ಲೀಗಲ್ ನೋಟೀಸ್ ನ ಕಛೇರಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು, 2 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಮತ್ತು ನಿಪಿ-12, 2 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-13 ಮತ್ತು ನಿಪಿ-14 ಎಂದು, ಪ್ರತಿವಾದಿಗಳ ಹೆಸರಿನಲ್ಲಿರುವ ದಿನಾಂಕ 07.10.2020 ರ ಶುದ್ಧ ಕ್ರಯ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-15 ಎಂದು, ಇಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-16 ಎಂದು, ಪ್ರತಿವಾದಿಗಳಿಗೆ 24 ಲಕ್ಷ ರೂಪಾಯಿ ಹಣ ಸಂದಾಯ ಮಾಡಿದ ಬಗ್ಗೆ ಪಂಜಾಬ್ ನ್ಯಾಷನಲ್ ಬ್ಯಾಂಕ್, ರಾಮನಗರ ಶಾಖೆಯ ಸ್ಟೇಟ್ ಮೆಂಟ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-17 ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಪ್ರತಿವಾದಿಗಳ ಪರ ವಕೀಲರಿಂದ :**

ಪ್ರತಿವಾದಿಗಳು ಮತ್ತು ಪ್ರತಿವಾದಿಗಳ ಪರ ವಕೀಲರು ಗೈರು ಹಾಜರಾಗಿದ್ದು, ಪ್ರತಿವಾದಿಗಳು ತಮ್ಮ ಪರವಾಗಿ ಯಾವುದೇ ಲಿಖಿತ ಹೇಳಿಕೆಯನ್ನು ಸಲ್ಲಿಸಿಲ್ಲ ಆದ್ದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.